# ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☎:0816-2255650, 2273511,ಫ್ಯಾಕ್ಸ್ :0816-2270719

ಸಂಖ್ಯೆ : ತು.ವಿ.: ಪ.ವಿ.:ವಿ.ನಿ.-09:2023-24: 1199A ದಿನಾಂಕ:19.02.2024

## ಅಧಿಸೂಚನೆ

EMS Repeaters

**ವಿಷಯ:**2023-24 ನೇ ಸಾಲಿನ 2024 ರ ಮಾರ್ಚ್/ಏಪ್ರಿಲ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ[ಎಂ.ಬಿ.ಎ. ಮತ್ತು ಎಂ.ಸಿ.ಎ ಹೊರತುಪಡಿಸಿ] I ಮತ್ತು III (ಪೂರಕ) ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ 2018-19 & 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

*****

2023-24 ನೇ ಸಾಲಿನ 2024 ರ ಮಾರ್ಚ್/ಏಪ್ರಿಲ್ ಮಾಹೆಗಳಲ್ಲಿ ನಡೆಯಲಿರುವ ವಿವಿಧ ಸ್ನಾತಕೋತ್ತರ ಪದವಿಗಳ[ಎಂ.ಬಿ.ಎ. ಮತ್ತು ಎಂ.ಸಿ.ಎ ಹೊರತುಪಡಿಸಿ] I ಮತ್ತು III (ಪೂರಕ) ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ,

1. 2020-21 ನೇ ಶೈಕ್ಷಣಿಕ ಸಾಲಿನ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಕೋಷ್ಟಕ – 01 ರಂತೆ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

**ಕೋಷ್ಟಕ - 01**

I ಮತ್ತು III (ಪೂರಕ) ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕದ ವಿವರಗಳು

| ಕ್ರ.ಸಂ | ಕೋರ್ಸ್ | ಪರೀಕ್ಷಾ ಶುಲ್ಕ | ಪೂರಕ (ಒಂದು ವಿಷಯಕ್ಕೆ) |
|---|---|---|---|
| 1. | ಎಂ.ಎ./ಎಂ.ಕಾಂ./ ಎಂ.ಕಾಂ.-ಇನ್‌ಫಾರ್ಮೇಷನ್ ಸಿಸ್ಟಮ್/ಎಂ.ಎಸ್ಸಿ./ಎಂ.ಎಸ್‌ಕಮ್ಯೂನಿಕೇಷನ್/ಎಂ.ಎಸ್ಸಿ ಎಲೆಕ್ಟ್ರಾನಿಕ್ ಮೀಡಿಯಾ/ಎಂ.ಎಲ್.ಐ.ಎಸ್ಸಿ | 1000-00 | 200-00 |
| 2. | ಎಂ.ಎಸ್.ಡಬ್ಲ್ಯೂ. | 1000-00 | 265-00 |
| 3. | ಎಂ.ಎಸ್ಸಿ. ಜೀವತಂತ್ರಜ್ಞಾನ/ಸೂಕ್ಷ್ಮಜೀವಶಾಸ್ತ್ರ | 2000-00 | 200-00 |
| 4. | P.G.Diploma in Coconut Plantation/ Environmental Impact. | 500-00 | – |

2. 2018-19 ನೇ ಸಾಲಿನಲ್ಲಿ ಪ್ರವೇಶ ಪಡೆದ (Double the Duration) ವಿದ್ಯಾರ್ಥಿಗಳಿಗೆ ಇದೊಂದು ವಿಶೇಷ ಪ್ರಕರಣವೆಂದು ಪರಿಗಣಿಸಿ ಒಂದು ಬಾರಿಗೆ ಮಾತ್ರ ಕೋಷ್ಟಕ – 02 ರಂತೆ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು.

**ಕೋಷ್ಟಕ - 02**

I ಮತ್ತು III (ಪೂರಕ) ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕದ ವಿವರಗಳು

| ಕ್ರ.ಸಂ | ಸೆಮಿಸ್ಟರ್/ ವಾರ್ಷಿಕ | ಕೋರ್ಸ್ (ಪೂರಕ ವಿದ್ಯಾರ್ಥಿಗಳಿಗೆ ಮಾತ್ರ) | ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿಗೆ ಮತ್ತು ಇದರ ಜೊತೆಗೆ ಇತರ ಶುಲ್ಕಗಳು ಸಹ ಪಾವತಿಸುವುದು | ಪೂರಕ (ಒಂದು ವಿಷಯಕ್ಕೆ) |
|---|---|---|---|---|
| 1. | I ಮತ್ತು III ನೇ ಸೆಮಿಸ್ಟರ್ | ಎಂ.ಎ./ಎಂ.ಕಾಂ./ ಎಂ.ಕಾಂ.-ಇನ್‌ಫಾರ್ಮೇಷನ್,ಸಿಸ್ಟಮ್/ಎಂ.ಎಸ್ಸಿ. /ಎಂ.ಎಸ್‌ಕಮ್ಯೂನಿಕೇಷನ್/ಎಂ.ಎಸ್ಸಿ ಎಲೆಕ್ಟ್ರಾನಿಕ್ ಮೀಡಿಯಾ/ಎಂ.ಎಲ್.ಐ.ಎಸ್ಸಿ | 2,500.00 | 750.00 |
| 2. | | ಎಂ.ಎಸ್.ಡಬ್ಲ್ಯೂ. | 2,500.00 | 750.00 |
| 3. | | ಎಂ.ಎಸ್ಸಿ. ಜೀವತಂತ್ರಜ್ಞಾನ/ಸೂಕ್ಷ್ಮಜೀವಶಾಸ್ತ್ರ | 2,500.00 | 750.00 |
| 4. | | P.G.Diploma in Coconut Plantation/ Environmental Impact. | 2,500.00 | 750.00 |

ಪು.ತಿ.ನೋ

*** ವಿದ್ಯಾರ್ಥಿಯು ಮೂರು ಅಥವಾ ಮೂರಕ್ಕಿಂತ ಹೆಚ್ಚು ವಿಷಯಗಳಿದ್ದಲ್ಲಿ ಸೆಮಿಸ್ಟರ್‌ವಾರು ಪೂರ್ಣ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಬೇಕು.

**ವಿಶೇಷ ಸೂಚನೆ:**

1. **2018-19 ನೇ ಮತ್ತು 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಪ್ರಥಮ ಮತ್ತು ತೃತೀಯ (ಪೂರಕ) ಸೆಮಿಸ್ಟರ್ ನ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಶುಲ್ಕ ಪಾವತಿಸಿಕೊಂಡು ಸದರಿ ವಿದ್ಯಾರ್ಥಿಗಳ ವಿವರವನ್ನು EMS ನಲ್ಲಿ ಕಡ್ಡಾಯವಾಗಿ ನಮೂದಿಸುವುದು.**

ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ವಿಷಯಗಳಿಗೆ/ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು.

ಪರೀಕ್ಷಾ ವೇಳಾಪಟ್ಟಿ ಮತ್ತು ಪರೀಕ್ಷಾ ಕೇಂದ್ರಗಳ ವಿವರಗಳನ್ನು ನಂತರದ ದಿನಗಳಲ್ಲಿ ತಿಳಿಸಲಾಗುವುದು.

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 05.03.2024 |
| 2. | ವಿದ್ಯಾರ್ಥಿಗಳಿಗೆ ರೂ 100/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 06.03.2024 |
| 3. | ವಿದ್ಯಾರ್ಥಿಗಳಿಗೆ ರೂ 500/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 07.03.2024 |
| 4. | ಕಾಲೇಜಿನವರು ಶುಲ್ಕವನ್ನು ವಿಶ್ವವಿದ್ಯಾನಿಲಯ ಖಾತೆಗೆ ಪಾವತಿಸಲು ಮತ್ತು ಶುಲ್ಕಗಳ ವಿವರವನ್ನು ಕಾಲೇಜಿನವರು/ ವಿಭಾಗದವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 11.03.2024 |

<u>ಕಾಲೇಜು/ವಿಭಾಗದ ವಿದ್ಯಾರ್ಥಿಗಳು ಆಯ್ಕೆ ಮಾಡಿಕೊಂಡಿರುವ ಮುಕ್ತ ಆಯ್ಕೆ ಪತ್ರಿಕೆಗಳನ್ನು (Open Elective Papers) ಖಚಿತಪಡಿಸಿಕೊಂಡು ನಂತರ ಸರಿಯಾಗಿ ಆನ್‌ಲೈನ್‌ಲ್ಲಿ ನಮೂದಿಸುವುದು.</u>

ಎಲ್ಲಾ ವರ್ಗಗಳ ಪೂರಕ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ (ಸೆಮಿಸ್ಟರ್‌ವಾರು) ಪರೀಕ್ಷಾ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು.

ಎಲ್ಲಾ ವರ್ಗದ ವಿದ್ಯಾರ್ಥಿಗಳೂ ಸಹ ಈ ಕೆಳಗೆ ನಮೂದಿಸಿರುವ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸುವುದು. <u>(ಪ್ರತಿ ಸೆಮಿಸ್ಟರ್‌ಗೆ ಅನ್ವಯಿಸುವಂತೆ)</u>

| ಕ್ರ.ಸಂ | ಇತರೆ ಶುಲ್ಕಗಳ ವಿವರ | ಮೊತ್ತ (ರೂ.ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ | 156-00 |
| 2. | ಆನ್‌ಲೈನ್ ಅರ್ಜಿ ಶುಲ್ಕ | 30-00 |
| 3. | ಅರ್ಜಿ ಪರಿಶೀಲನಾ ಶುಲ್ಕ | 10-00 |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Process fee) | 40-00 |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ (Per Practical) | 150-00 |
| 6. | ಪ್ರಾಜೆಕ್ಟ್ ಶುಲ್ಕ (Per Project) (ಅನ್ವಯಿಸಿದ್ದಲ್ಲಿ ಮಾತ್ರ.) | 200-00 |
| 7. | ಕಿರು ಪ್ರಬಂಧ ಶುಲ್ಕ (Per Dissertation) (ಅನ್ವಯಿಸಿದ್ದಲ್ಲಿ ಮಾತ್ರ.) | 200-00 |
| 8. | ಮೌಖಿಕ ಸಂದರ್ಶನ (Per Viva-Voce ) (ಅನ್ವಯಿಸಿದ್ದಲ್ಲಿ ಮಾತ್ರ.) | 150-00 |

ಪು.ತಿ.ನೋ

- ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರವನ್ನು ವಿಷಯದೊಂದಿಗೆ ಆನ್‌ಲೈನ್‌ನಲ್ಲಿ ನಮೂದಿಸುವುದು. ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ಸಂಬಂಧಿಸಿದ ವಿಷಯಗಳಿಗೆ/ ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ, ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಯವಾದಲ್ಲಿ ಸಂಬಂಧಪಟ್ಟ ನಿರ್ದೇಶಕರು/ಪ್ರಾಂಶುಪಾಲರು/ಮುಖ್ಯಸ್ಥರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.
- ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ಕಾಯ್ದೆ 2000 ರ ಅಧಿನಿಯಮ 60, 61 & 68 ರಂತೆ ವಿಶ್ವವಿದ್ಯಾನಿಲಯದಿಂದ ದಾಖಲಾತಿ ಅನುಮೋದನೆಗೊಳ್ಳದ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳಬಾರದು ಮತ್ತು ಪರೀಕ್ಷಾ ಶುಲ್ಕ ಪಾವತಿಸಲು ಅನುಮತಿ ನೀಡಬಾರದು.
- ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಂಪಾಲರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಆನ್‌ಲೈನ್‌ನಲ್ಲಿ ಕೋರುವ ಎಲ್ಲಾ ಮಾಹಿತಿಯನ್ನು ಸರಿಯಾಗಿ ನಮೂದಿಸಬೇಕು.
- **ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ.**
- **ವಿದ್ಯಾರ್ಥಿಗಳು ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.**
- ವಿಶ್ವವಿದ್ಯಾನಿಲಯದಿಂದ ಪ್ರವೇಶ ಅನುಮೋದನೆ ಪಡೆದ ಅರ್ಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ **RTGS / NEFT ಮೂಲಕ ಎಸ್.ಬಿ.ಐ. ಖಾತೆ ನಂ.36954908103 ಗೆ ದಿನಾಂಕ: 11.03.2024 ರೊಳಗೆ ಪಾವತಿಸುವುದು.**
- ವಿಭಾಗದ ಮುಖ್ಯಸ್ಥರು/ ಸಂಯೋಜಕರು ವಿದ್ಯಾರ್ಥಿಗಳಿಂದ ಎಸ್.ಬಿ.ಐ ಆನ್‌ಲೈನ್‌ನಲ್ಲಿ ಪರೀಕ್ಷಾ ಶುಲ್ಕವನ್ನು ಪಾವತಿಸುವುದು ಮತ್ತು ವಿದ್ಯಾರ್ಥಿಗಳಿಂದ ಶುಲ್ಕ ಪಾವತಿಸಿದ ರಶೀದಿಯನ್ನು ಪಡೆಯುವುದು.
- **ಪರೀಕ್ಷಾ ಶುಲ್ಕ ಪಾವತಿಸಿರುವ ವಿದ್ಯಾರ್ಥಿಗಳ ಪಟ್ಟಿಯನ್ನು (ಸೆಮಿಸ್ಟರ್‌ವಾರು ವಿದ್ಯಾರ್ಥಿಯ ಹೆಸರು, ನೋಂದಣಿ ಸಂಖ್ಯೆ, ವರ್ಗ, ಪರೀಕ್ಷಾ ಶುಲ್ಕದ ಮೊತ್ತ,** S B I Collect reference Number **ಮತ್ತು ದಿನಾಂಕಗಳ ಮಾಹಿತಿಗಳೊನ್ನೊಳಗೊಂಡ ಪಟ್ಟಿ)** ಸಂಬಂಧಿಸಿದ ದಾಖಲೆಗಳೊಂದಿಗೆ (ಹಣ ಪಾವತಿಸಿದ ರಶೀದಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರದ ನಕಲು ಪ್ರತಿ) ವಿಭಾಗದ ಮುಖ್ಯಸ್ಥರು/ನಿರ್ದೇಶಕರು/ ಪ್ರಾಂಶುಪಾಲರು ದೃಢೀಕರಿಸಿ **ದಿನಾಂಕ:11.03.2024 ರೊಳಗೆ** ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. ಪರೀಕ್ಷಾ ಶುಲ್ಕದ ಹಣಕಾಸು ಪಟ್ಟಿಯನ್ನು ದ್ವಿಪ್ರತಿಗಳಲ್ಲಿ. (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಒಂದು ಪ್ರತಿಯನ್ನು ತಪ್ಪದೇ ಸಲ್ಲಿಸುವುದು).
- ಒಮ್ಮೆ ವಿಶ್ವವಿದ್ಯಾನಿಲಯಕ್ಕೆ ಪಾವತಿಸಿದ ಪರೀಕ್ಷಾ ಶುಲ್ಕವನ್ನು ಯಾವುದೇ ಕಾರಣಕ್ಕೂ ಮರುಪಾವತಿಸುವುದಿಲ್ಲ ಹಾಗೂ ಇತರೆ ಶುಲ್ಕಕ್ಕೆ ಮರುಹೊಂದಿಸಲಾಗುವುದಿಲ್ಲ.
- ಪುನರಾವರ್ತಿತ ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ದರ್ಜೆ ಉನ್ನತೀಕರಣ (ಅಂಕಾಭಿವೃದ್ಧಿ) ಪಡೆಯಲು ಅನುಮತಿ ಪಡೆದ ವಿದ್ಯಾರ್ಥಿಗಳು ಸೇರಿ) ವಿಶ್ವವಿದ್ಯಾನಿಲಯದಿಂದ ಘೋಷಣೆಯಾಗುವ ರ್‍ಯಾಂಕ್‌ಗೆ ಅರ್ಹರಿರುವುದಿಲ್ಲ.
- ವಿಶ್ವವಿದ್ಯಾನಿಲಯ ಧನಸಹಾಯ ಆಯೋಗ(ಯು.ಜಿ.ಸಿ.)ದ ನಿರ್ದೇಶನದ ಅನುಸಾರ D.O.No.F.12-1/2015 (CPP-II) 15th October 2015, ವಿದ್ಯಾರ್ಥಿಯು ಸ್ನಾತಕೋತ್ತರ ಪದವಿಗೆ ಪ್ರವೇಶ ಪಡೆದ ವರ್ಷದಿಂದ 04 ಶೈಕ್ಷಣಿಕ ವರ್ಷದೊಳಗೆ ಸ್ನಾತಕೋತ್ತರ ಪದವಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.

<u>ಆಂತರಿಕ ಅಂಕಗಳನ್ನು ಮತ್ತು ಕಿರು ಪ್ರಬಂಧ (Dissertation) ಗಳನ್ನು ಸಲ್ಲಿಸುವ ಕುರಿತು ಸೂಚನೆಗಳು:</u>

1. ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಿ, ಆಂತರಿಕ ಅಂಕಗಳನ್ನು ಮತ್ತು ಕಿರು ಪ್ರಬಂಧಗಳನ್ನು ಸೈದ್ಧಾಂತಿಕ (Theory) ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ ಪರೀಕ್ಷಾಂಗ ವಿಭಾಗಕ್ಕೆ ಸಲ್ಲಿಸುವುದು. ಹಾಗೂ ಆಂತರಿಕ ಅಂಕಗಳನ್ನು ಸಲ್ಲಿಸುವಾಗ ವಿಳಂಭವಾದಲ್ಲಿ / ಸರಿಯಾಗಿ ನೀಡದಿದ್ದಲ್ಲಿ ದಿನವೊಂದಕ್ಕೆ ರೂ. 1,000/-ಗಳಂತೆ ಗರಿಷ್ಠ ರೂ. 10,000-00 (ಹತ್ತು ದಿನಕ್ಕೆ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ.
2. ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನೀಡುವುದು ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರ ಜವಾಬ್ದಾರಿಯಾಗಿದ್ದು, ಯಾವುದೇ ರೀತಿಯ ತಪ್ಪುಗಳಾಗದಂತೆ ಎಚ್ಚರಿಕೆ ವಹಿಸುವುದು.
3. ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಾಗ ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರು ಹಾಗೂ ಪ್ರಾಂಶುಪಾಲರು ಪರಿಶೀಲಿಸಿ ದೃಢೀಕರಿಸಿ ಸಲ್ಲಿಸುವುದು.
4. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಬದಲಿಸುವುದಿಲ್ಲ.

**ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆ ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಗಣಕಯಂತ್ರ ವಿಭಾಗದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು. (ಮೊಬೈಲ್ ಸಂಖ್ಯೆ: 8618346117)**

**ಎಲ್ಲಾ, ಮುಖ್ಯಸ್ಥರು/ನಿರ್ದೇಶಕರು/ಪ್ರಾಂಶುಪಾಲರು ಸಹಕರಿಸಬೇಕಾಗಿ ಕೋರಲಾಗಿದೆ.**

**ಆದೇಶದ ಮೇರೆಗೆ,**

20/2/21.

**ಕುಲಸಚಿವರು (ಪರೀಕ್ಷಾಂಗ)**

**ಗೆ,**

**ಮುಖ್ಯಸ್ಥರು/ ಸಂಯೋಜಕರು /ನಿರ್ದೇಶಕರು / ಪ್ರಾಂಶುಪಾಲರು/ ವಿವಿಧ ಸ್ನಾತಕೋತ್ತರ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**<u>ಪ್ರತಿಗಳು:</u>**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560 001.
2. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ವಿಶ್ವವಿದ್ಯಾನಿಲಯ ಅಂತರ್ಜಾಲದಲ್ಲಿ ಪ್ರಕಟಿಸುವುದು
8. ಫಲಿತಾಂಶ ಗಣಕೀಕರಣ ವಿಭಾಗ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಅಗತ್ಯ ಕ್ರಮಕ್ಕಾಗಿ
9. ಕಛೇರಿ ಪ್ರತಿ.